# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1431 (1662)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ಆಲಿಕಲ್ಲು ಮಳೆಗೆ ತೋಟಗಾರಿಕೆ ಬೆಳೆಗಳು ನಾಶವಾಗಿರುವ ಬಗ್ಗೆ

(ಅ) ಫೆಬ್ರುವರಿ-2021ರ ಮಾಹೆಯಲ್ಲಿ ಅಕಾಲಿಕವಾಗಿ ಸುರಿದ ಭಾರಿ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದ ತೋಟಗಾರಿಕೆ ಬೆಳೆಗಳು (ಕಾಫಿ, ಮೆಣಸು, ಅಡಿಕೆ, ಬಾಳೆ, ತೆಂಗು, ಮೆಣಸಿನಕಾಯಿ, ಆಲೂಗಡ್ಡೆ ಇತ್ಯಾದಿ) ನಾಶವಾಗಿ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಾಶವಾಗಿರುವ ಬೆಳೆಗಳ ಸಮೀಕ್ಷೆ ನಡೆಸಲಾಗಿದೆಯೇ; (ವಿವರ ನೀಡುವುದು)

(ಆ) ಈ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಯಾವ ಯಾವ ತೋಟಗಾರಿಕೆ ಬೆಳೆಗಳು ನಾಶವಾಗಿವೆ; ಇವುಗಳ ಪ್ರಮಾಣವೆಷ್ಟು; ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಮಳೆಯಿಂದ ಬೆಳೆ ನಷ್ಟ ಹೊಂದಿರುವ ರೈತರಿಗೆ ಪರಿಹಾರ ನೀಡಲು ಸರ್ಕಾರವು ಕ್ರಮ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಯಾವ ಯಾವ ಬೆಳೆಗಳಿಗೆ ಎಷ್ಟು ಪರಿಹಾರ ನೀಡಲಾಗುತ್ತಿದೆ? (ವಿವರ ನೀಡುವುದು)